ಕಾಮಾಖ್ಯ ದೇವಿಗೆ ಒಂಬತ್ತು ಭಾಷೆಗಳ ಸಂಗೀತ ನಮನ: 'ಕಾಮಾಖ್ಯಪ್ರಿಯ' ರಾಗ ಅನಾವರಣ

ಸಂಜೆ ಎಕ್ಸ್‌ಪ್ರೆಸ್, ಗುವಾಹಾಟಿ, ಅಸ್ಸಾಂ,ಆ 5: ಅಂತರರಾಷ್ಟ್ರೀಯ ಪ್ರಶಸ್ತಿ ಪುರಸ್ಕೃತ ಸಂಗೀತ ಸಂಯೋಜಕ ಮಹೇಶ್ ಮಹದೇವ್ ಅವರು ಕಾಮಾಖ್ಯ ದೇವಿಯ ಅನುಗ್ರಹದಿಂದ 'ಕಾಮಾಖ್ಯಪ್ರಿಯ' ಎಂಬ ನೂತನ ಶಾಸ್ತ್ರೀಯ ರಾಗವನ್ನು ಸೃಷ್ಟಿಸಿದ್ದು, ಅದೇ ರಾಗದಲ್ಲಿ ಸಂಸ್ಕೃತ ಸೇರಿದಂತೆ ಒಂಬತ್ತು ಭಾಷೆಗಳಲ್ಲಿ ಭಕ್ತಿ ಗೀತೆಗಳನ್ನು ಸಂಯೋಜಿಸಿ ಕಾಮಾಖ್ಯ ದೇವಿಗೆ ಸಂಗೀತ ನಮನ ಸಲ್ಲಿಸಿದ್ದಾರೆ. ಕರ್ನಾಟಕ ಶಾಸ್ತ್ರೀಯ ಸಂಗೀತದ 20ನೇ ಮೇಳಕರ್ತ ರಾಗ ನಟಭೈರವಿಯ ಜನ್ಯ ರಾಗವಾಗಿರುವ 'ಕಾಮಾಖ್ಯಪ್ರಿಯ' ಶಾಡವ-ಶಾಡವ ರಾಗ ವರ್ಗಕ್ಕೆ ಸೇರಿದೆ. ಈ ನೂತನ ರಾಗದ ಮೊದಲ ಗೀತೆಗೆ ಖ್ಯಾತ ಬಹುಭಾಷಾ ಹಿನ್ನೆಲೆ ಗಾಯಕಿ ಡಾ. ಪ್ರಿಯದರ್ಶಿನಿ ಧ್ವನಿಯಾಗಿದ್ದಾರೆ.

ಕಾಮಾಖ್ಯ ದೇವಸ್ಥಾನದ ಸನ್ನಿಧಿಯಲ್ಲಿ ನಡೆದ ಸರಳ ಸಮಾರಂಭದಲ್ಲಿ ಕ್ರಿಯೇಟಿವ್ ಡಿವೈಸಸ್ ಸಂಸ್ಥೆಯ ಛೇರ್ಮನ್ ಡಾ. ಬಿ. ಎಂ. ಉಮೇಶ್ ಕುಮಾರ್ ಅವರು ಆಲ್ಬಂಗಳ ಆಡಿಯೋವನ್ನು ಅನಾವರಣಗೊಳಿಸಿದರು. ಇದೇ ಸಂದರ್ಭದಲ್ಲಿ ಮಹೇಶ್ ಮಹದೇವ್ ಅವರು 'ಕಾಮಾಖ್ಯಪ್ರಿಯ' ರಾಗದ ಸ್ವರ ವಿನ್ಯಾಸವನ್ನು ಒಳಗೊಂಡ ಮುದ್ರಿತ ಫಲಕವನ್ನು ಕಾಮಾಖ್ಯ ದೇವಿಯ ಮೂಲ ಉದ್ಭವ ಶಿಲೆಗೆ ಸ್ಪರ್ಶಿಸಿ ರಾಗವನ್ನು ದೇವಿಗೆ ಸಮರ್ಪಿಸಿದರು.

ಈ ಭಕ್ತಿ ಸಂಗೀತ ಸಂಗ್ರಹದಲ್ಲಿ ಒಂಬತ್ತು ಭಾಷೆಗಳಲ್ಲಿ ಮೂಡಿಬಂದಿರುವ 'ಜೈ ಜೈ ಮಾ ಕಾಮಾಖ್ಯಾ', 'ಕಾಮಾಖ್ಯ ಬೀಜ ಮಂತ್ರ' ಹಾಗೂ 'ಕಾಮಾಖ್ಯಾ ಸ್ತೋತ್ರಂ' ಸೇರಿದಂತೆ ಹಲವು ಕೃತಿಗಳು ಒಳಗೊಂಡಿವೆ. ಅಸ್ಸಾಮಿ, ಕನ್ನಡ, ಸಂಸ್ಕೃತ, ಹಿಂದಿ, ತೆಲುಗು, ಬೆಂಗಾಲಿ, ತಮಿಳು, ನೇಪಾಳಿ ಹಾಗೂ ಒಡಿಯಾ ಭಾಷೆಗಳಲ್ಲಿ ಸಿದ್ಧಗೊಂಡಿರುವ ಈ ಆಲ್ಬಮ್‌ನಲ್ಲಿ ಡಾ. ಪ್ರಿಯದರ್ಶಿನಿ, ರಾಜ್ ನಸೀಮ್, ಮಹೇಶ್ ಮಹದೇವ್ ಹಾಗೂ ಅಜಯ್ ವಾರಿಯರ್ ಕಂಠ ನೀಡಿದ್ದು, ಸುಮತಿ ರಾಮ್, ರಿಯಾ ಚೌಧರಿ, ಮಹೇಶ್ ಮಹದೇವ್ ಹಾಗೂ ರಾಜ್ ನಸೀಮ್ ಸಾಹಿತ್ಯ ರಚಿಸಿದ್ದಾರೆ. ಸುನಿಲ್ ಮಹಾದೇವ್ ಮತ್ತು ತಂಡ ಛಾಯಾಗ್ರಹಣ ಹಾಗೂ ಸಂಕಲನ ಜವಾಬ್ದಾರಿ ಹೊತ್ತಿದ್ದಾರೆ.

ಶಿವಶಕ್ತಿ ಡಿಜಿಟಲ್ ಮೀಡಿಯಾ ಪ್ರೊಡಕ್ಷನ್ಸ್ ನಿರ್ಮಿಸಿರುವ ಈ ಸಂಗೀತ ಯೋಜನೆಯ ವೀಡಿಯೋ ಆವೃತ್ತಿಯು ಶೀಘ್ರದಲ್ಲೇ PM Audios and Entertainments ಯೂಟ್ಯೂಬ್ ಚಾನೆಲ್ ಹಾಗೂ ಪ್ರಮುಖ OTT ಸಂಗೀತ ಸ್ಟ್ರೀಮಿಂಗ್ ವೇದಿಕೆಗಳಲ್ಲಿ ಬಿಡುಗಡೆಯಾಗಲಿದೆ.

ಮುನೇಶ್ವರ ಸ್ವಾಮಿ ಪಲ್ಲಕ್ಕಿ ಮೆರವಣಿಗೆ: ಭಕ್ತಿಭಾವದಿಂದ ಆಶೀರ್ವಾದ ಪಡೆದ ಮಾಜಿ ಸಚಿವ ಕೃಷ್ಣಯ್ಯ ಶೆಟ್ಟಿ

ಸಂಜೆ ಎಕ್ಸ್‌ಪ್ರೆಸ್, ಮಾಲೂರು, ಆ 5: ಮಾಲೂರು ನಗರದಲ್ಲಿ ಮಂಗಳವಾರ ಶ್ರೀ ಮುನೇಶ್ವರ ಸ್ವಾಮಿಯ ಭವ್ಯ ಪಲ್ಲಕ್ಕಿ ಮೆರವಣಿಗೆ ಉತ್ಸವವು ಅತ್ಯಂತ ವೈಭವ ಹಾಗೂ ಸಡಗರದಿಂದ ಜರುಗಿತು.ಈ ಪವಿತ್ರ ಧಾರ್ಮಿಕ ಕಾರ್ಯಕ್ರಮದಲ್ಲಿ ಮಾಜಿ ಸಚಿವರಾದ ಮಾಲೂರು ಎಸ್. ಎನ್. ಕೃಷ್ಣಯ್ಯ ಶೆಟ್ಟಿ ಅವರು ಭಕ್ತಿಭಾವದಿಂದ ಪಾಲ್ಗೊಂಡು, ಶ್ರೀ ಮುನೇಶ್ವರ ಸ್ವಾಮಿಯ ದರ್ಶನ ಪಡೆದು ವಿಶೇಷ ಪೂಜೆ ಸಲ್ಲಿಸಿ, ಸ್ವಾಮಿಯ ಕೃಪೆಗೆ ಪಾತ್ರರಾಗಿ ಆಶೀರ್ವಾದ ಪಡೆದರು.

ಮೆರವಣಿಗೆ ಯುದ್ದಕ್ಕೂ ನೂರಾರು ಭಕ್ತಾದಿಗಳು ಭಾಗವಹಿಸಿ ಸ್ವಾಮಿಯ ಕೃಪೆಗೆ ಪಾತ್ರರಾದರು. ಈ ಪವಿತ್ರ ಮೆರವಣಿಗೆಯಲ್ಲಿ ಶ್ರದ್ಧಾ-ಭಕ್ತಿಯಿಂದ ಭಾಗವಹಿಸಿದ ಎಲ್ಲಾ ಭಕ್ತಾದಿಗಳಿಗೆ ಹಾಗೂ ಇಡೀ ಧಾರ್ಮಿಕ ಕಾರ್ಯಕ್ರಮವನ್ನು ಧಾರ್ಮಿಕವಾಗಿ ನಡೆಸಿದ ದೇವಾಲಯದ ಆಡಳಿತ ಮಂಡಳಿ ಮತ್ತು ಎಲ್ಲಾ ಸೇವಾಭಿಮಾನಿಗಳಿಗೆ ಈ ಸಂದರ್ಭದಲ್ಲಿ ಹೃತ್ಪೂರ್ವಕ ಅಭಿನಂದನೆಗಳನ್ನು ಸಲ್ಲಿಸಲಾಯಿತು.

ಲೋಕಕಲ್ಯಾಣಾರ್ಥವಾಗಿ ನಡೆದ ಈ ಉತ್ಸವದಲ್ಲಿ ನಗರದ ಪ್ರಮುಖ ರಸ್ತೆಗಳಲ್ಲಿ ಮುನೇಶ್ವರ ಸ್ವಾಮಿಯ ಪಲ್ಲಕ್ಕಿ ಸಂಚರಿಸಿದಾಗ ಭಕ್ತರು ರಸ್ತೆಯುದ್ದಕ್ಕೂ ಸಾಲಾಗಿ ನಿಂತು ಪೂಜೆ ನೆರವೇರಿಸಿದ್ದು ವಿಶೇಷವಾಗಿತ್ತು.

ಈ ಸಂದರ್ಭದಲ್ಲಿ ಮಾಜಿ ಪುರಸಭಾ ಸದಸ್ಯ ಭಾನುತೇಜಾ, ಮುನಿರಾಜ್, ಪೈಲ್ವಾನ್ ಮಂಜು, ದೇವಾಲಯದ ಮುಖಂಡರು, ಭಕ್ತಾದಿಗಳು, ಹಾಜರಿದ್ದರು.

ಸರ್ಕಾರಿ ಶಾಲೆಯ ಗೋಡೆ ಸಿಂಗಾರಗೊಳಿಸಿದ ವಿದ್ಯಾರ್ಥಿಗಳು

ಸಂಜೆ ಎಕ್ಸ್‌ಪ್ರೆಸ್ ಸುದ್ದಿ, ಪೀಣ್ಯ ದಾಸರಹಳ್ಳಿ,ಆ.5– ಬೆಂಗಳೂರಿನ ಎನ್.ಎಸ್.ಬಿ ಅಕಾಡೆಮಿ ವಿದ್ಯಾಸಂಸ್ಥೆಗೆ ಸೇರಿದ ಎನ್‌ಎಸ್‌ಎಸ್ ವಿದ್ಯಾರ್ಥಿಗಳು, ಯುವಕರ ಸಂಘ ಎನ್‌ಜಿಒ ಸಹಭಾಗಿತ್ವದಲ್ಲಿ, ಸಮಾಜಮುಖಿ ಚಟುವಟಿಕೆಯ ಭಾಗವಾಗಿ ಶ್ರೀ ಗುರು ಶಂತಾನಂದ ಸ್ವಾಮಿ ಹೈ ಸ್ಕೂಲ್ (ಬೆಂಗಳೂರು) ಶಾಲೆಯ ಗೋಡೆಗಳ ನವೀಕರಣ ಕಾರ್ಯವನ್ನು ಕೈಗೊಂಡು ಪರಿಸರ ಸ್ನೇಹಿ ಚಿತ್ರಗಳನ್ನು ಬಿಡಿಸಿದರು. ಈ ವಿದ್ಯಾರ್ಥಿಗಳ ಸೇವಾಭಾವದಿಂದ ಶಾಲೆಯ ಪರಿಸರ ಹೊಸ ರೂಪ ಪಡೆದು, ಮಕ್ಕಳಿಗೆ ಪ್ರೇರಣಾದಾಯಕ ವಾತಾವರಣವನ್ನು ಒದಗಿಸಿದೆ. ಈ ಕಾರ್ಯದಲ್ಲಿ ವಿದ್ಯಾರ್ಥಿಗಳ ಉತ್ಸಾಹ, ತಂಡದ ಸೇವಾಭಾವನೆ ಮತ್ತು ಸಾಮಾಜಿಕ ಜವಾಬ್ದಾರಿ ಸ್ಪಷ್ಟವಾಗಿ ಪ್ರತಿಫಲಿಸಿದೆ.

ಸರಳತೆಯ ಹಾದಿ ಹಿಡಿದ ಸಚಿವ ವಿಜಯಾನಂದ ಕಾಶಪ್ಪನವರ್

ಹೂಗುಚ್ಛ, ಶಾಲು, ಪೇಟಗಳಿಗೆ ಸಚಿವರಿಂದ ಬ್ರೇಕ್!

ಸಂಜೆ ಎಕ್ಸ್‌ಪ್ರೆಸ್, ಬೆಂಗಳೂರು, ಆ 5: ರಾಜಕೀಯ ವಲಯದಲ್ಲಿ ಸಚಿವರು ಅಥವಾ ನಾಯಕರು ಅಧಿಕಾರಕ್ಕೇರಿದಾಗ ಬೃಹತ್ ಹೂಹಾರಗಳು, ಪೇಟಗಳು, ಶಾಲೆಗಳನ್ನು ನೀಡಿ ಸನ್ಮಾನಿಸುವುದು ಇಲ್ಲವೇ ಗೌರವಿಸುವುದು, ಕಳೆದ ಹಲವಾರು ವರ್ಷಗಳಿಂದ ನಡೆದುಕೊಂಡು ಬಂದೆ ಇದೆ.

ಆದರೆ ಇದಕ್ಕೆ ವ್ಯತಿರಿಕ್ತ ಎಂಬಂತೆ ಇತ್ತೀಚೆಗಷ್ಟೇ ನೂತನ ಸಚಿವರಾಗಿ ಸಂಪುಟಕ್ಕೆ ಸೇರ್ಪಡೆಯಾಗಿರುವ ಸಚಿವ ವಿಜಯಾನಂದ ಕಾಶಪ್ಪನವರ್ ಹೊಸ ಸಂಪ್ರದಾಯಕ್ಕೆ ನಾಂದಿ ಹಾಡಿದ್ದಾರೆ.

ತಮ್ಮನ್ನು ಭೇಟಿಯಾಗಲು ಬರುವ ಸಾರ್ವಜನಿಕರು, ಕಾರ್ಯಕರ್ತರು ಅಭಿಮಾನಿಗಳು ಸೇರಿದಂತೆ ಯಾರೊಬ್ಬರೂ ತಮಗೆ ಶಾಲು, ಪೇಟ, ತರಬಾರದೆಂದು ಮನವಿ ಮಾಡಿಕೊಂಡಿದ್ದಾರೆ.

ಅಲ್ಲದೆ ಇದನ್ನು ಯಾರೊಬ್ಬರೂ ಅನ್ಯತಾ ಭಾವಿಸಬಾರದು ಎಂದು ಸಚಿವ ಕಾಶಪ್ಪನವರ್ ವಿನಮ್ರವಾಗಿ ಕಾರ್ಯಕರ್ತರು ಹಾಗೂ ಅಭಿಮಾನಿಗಳಲ್ಲಿ ಮನವಿ ಮಾಡಿದ್ದಾರೆ

ಹಾರ ತುರಾಯಿ ಪೇಟ ಶಾಲು ತರುವುದಕ್ಕೆ ಅನಗತ್ಯವಾಗಿ ಬಂದು ವೆಚ್ಚ ಮಾಡುವ ಬದಲು ಸರಳವಾಗಿಯೇ ತಮ್ಮ ಕಚೇರಿ ಇಲ್ಲವೇ ನಿವಾಸಕ್ಕೆ ಬಂದು ಯಾವುದೇ ಸಂದರ್ಭದಲ್ಲಿ ಭೇಟಿಯಾಗಬಹುದು ಎಂದು ತಿಳಿಸಿದ್ದಾರೆ.

ಇಂದಿನ ರಾಜಕೀಯ ಮತ್ತು ಸಾಮಾಜಿಕ ವಾಸ್ತವಿಕತೆಯಲ್ಲಿ ಅತಿಶಯೋಕ್ತಿಯ ಸನ್ಮಾನಗಳು ಮತ್ತು ಅದ್ದೂರಿ ಸ್ವಾಗತಗಳು ಅನಗತ್ಯ ಖರ್ಚಿಗೆ ಕಾರಣವಾಗುವುದಲ್ಲದೆ, ಸಮಯದ ನಷ್ಟಕ್ಕೂ ದಾರಿ ಮಾಡಿಕೊಡುತ್ತವೆ.

ಸಾರ್ವಜನಿಕರ ಹಣ ಅಥವಾ ಅಭಿಮಾನಿಗಳ ಕಷ್ಟಪಟ್ಟು ಸಂಪಾದಿಸಿದ ಹಣವನ್ನು ಇಂತಹ ತಾತ್ಕಾಲಿಕ ವಸ್ತುಗಳ ಮೇಲೆ ವ್ಯಯ ಮಾಡುವುದಕ್ಕಿಂತ, ಜನಪರ ಕೆಲಸಗಳಿಗೆ ಬಳಸುವುದು ಉತ್ತಮ ಎಂಬ ಸಂದೇಶವನ್ನು ಈ ನಿರ್ಧಾರ ಸಾರುತ್ತದೆ.

ದಾಖಲೆ ನೀಡದಿದ್ದರೆ ಗೃಹ ಜ್ಯೋತಿ ಕರೆಂಟ್ ಕಟ್?!

ಸಂಜೆ ಎಕ್ಸ್‌ಪ್ರೆಸ್, ಬೆಂಗಳೂರು, ಆ 5: ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಗೃಹಜ್ಯೋತಿ ಯೋಜನೆಯಡಿ ಉಚಿತ ವಿದ್ಯುತ್ ಪಡೆಯುತ್ತಿರುವ ಗ್ರಾಹಕರಿಗೆ ಇಂಧನ ಇಲಾಖೆ ಶಾಕಿಂಗ್ ಸುದ್ದಿ ನೀಡಿದ್ದು, ರಾಜ್ಯಾದ್ಯಂತ ನಡೆಯುತ್ತಿರುವ ಮನೆ–ಮನೆ ಸಮೀಕ್ಷೆಯಲ್ಲಿ ಅಗತ್ಯ ದಾಖಲೆಗಳು ಮತ್ತು ಮಾಹಿತಿಯನ್ನು ನೀಡದಿದ್ದರೆ ಫಲಾನುಭವಿಗಳು ಯೋಜನೆಯ ವ್ಯಾಪ್ತಿಯಿಂದ ಹೊರಗುಳಿಯುವ ಸಾಧ್ಯತೆ ಇದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಈ ಹಿನ್ನೆಲೆಯಲ್ಲಿ ಯಾವುದೇ ಅರ್ಹ ಗ್ರಾಹಕರು ಯೋಜನೆಯ ಸೌಲಭ್ಯದಿಂದ ವಂಚಿತರಾಗದಂತೆ ವಿಶೇಷ ಶಿಬಿರಗಳನ್ನು ಆಯೋಜಿಸುವ ಪ್ರಸ್ತಾವನೆಯನ್ನೂ ಸರ್ಕಾರದ ಮುಂದಿಡಲಾಗಿದೆ. ಇಂಧನ ಇಲಾಖೆಯ ಅಂಕಿ–ಅಂಶಗಳ ಪ್ರಕಾರ ರಾಜ್ಯದಲ್ಲಿ ಗೃಹಜ್ಯೋತಿ ಯೋಜನೆಯಡಿ 1,65,32,652 ಗೃಹ ವಿದ್ಯುತ್ ಗ್ರಾಹಕರು ನೋಂದಾಯಿಸಿಕೊಂಡಿದ್ದಾರೆ. ಇವರಲ್ಲಿ ಆಗಸ್ಟ್ 2ರವರೆಗೆ 91,50,081 ಫಲಾನುಭವಿಗಳ ಮನೆಗಳಿಗೆ ಮೀಟರ್ ರೀಡರ್‌ಗಳು ಭೇಟಿ ನೀಡಿ ಸಮೀಕ್ಷೆ ಪೂರ್ಣಗೊಳಿಸಿದ್ದು, ಇನ್ನೂ 73,82,571 ಫಲಾನುಭವಿಗಳ ಮಾಹಿತಿ ಸಂಗ್ರಹವಾಗಿಲ್ಲ.

ಮನೆ–ಮನೆ ಸಮೀಕ್ಷೆಯ ಉದ್ದೇಶ ಯೋಜನೆಯ ಫಲಾನುಭವಿಗಳ ವಿವರಗಳನ್ನು ನವೀಕರಿಸುವುದು ಮತ್ತು ಯೋಜನೆಯ ಲಾಭ ಸರಿಯಾದ ಫಲಾನುಭವಿಗಳಿಗೆ ತಲುಪುತ್ತಿರುವುದನ್ನು ಖಚಿತಪಡಿಸಿಕೊಳ್ಳುವುದಾಗಿದೆ. ಸಮೀಕ್ಷೆ ವೇಳೆ ಗ್ರಾಹಕರು ಮನೆಯಲ್ಲಿ ಇಲ್ಲದಿದ್ದರೆ ಅಥವಾ ಮಾಹಿತಿ ನೀಡಲು ನಿರಾಕರಿಸಿದರೆ ಅವರು ಯೋಜನೆಯ ಪಟ್ಟಿಯಿಂದ ಹೊರಗುಳಿಯುವ ಸಾಧ್ಯತೆ ಇದೆ ಎಂಬ ಎಚ್ಚರಿಕೆಯನ್ನು ಇಲಾಖೆ ನೀಡಿದೆ.

ಈ ಸಮಸ್ಯೆಗೆ ಪರಿಹಾರ ಕಂಡುಕೊಳ್ಳಲು ರಾಜ್ಯದ ಎಲ್ಲಾ ಎಸ್ಕಾಂ ಕಚೇರಿಗಳಲ್ಲಿ ವಿಶೇಷ ಸಮೀಕ್ಷಾ ಶಿಬಿರಗಳನ್ನು ನಡೆಸಲು ಸರ್ಕಾರದ ಅನುಮತಿ ಕೋರಲಾಗಿದೆ. ಈ ಶಿಬಿರಗಳಲ್ಲಿ ಫಲಾನುಭವಿಗಳು ಸ್ವತಃ ಹಾಜರಾಗಿ ತಮ ದಾಖಲೆಗಳು ಮತ್ತು ಮಾಹಿತಿಯನ್ನು ಸಲ್ಲಿಸಬಹುದಾಗಿದೆ. ಅಲ್ಲದೆ ಮೊದಲ ಬಾರಿ ಮನೆಗೆ ಭೇಟಿ ನೀಡಿದಾಗ ಫಲಾನುಭವಿಗಳು ಸಿಗದಿದ್ದರೆ ಅಥವಾ ಮಾಹಿತಿ ನೀಡದಿದ್ದರೆ, ಮೀಟರ್ ರೀಡರ್‌ಗಳು ಮತ್ತೊಮ್ಮೆ ಮನೆಗಳಿಗೆ ಭೇಟಿ ನೀಡುವಂತೆ ನಿರ್ದೇಶನ ನೀಡಲಾಗಿದೆ.

ಈ ನಡುವೆ ಬೆಸ್ಕಾಂ ವ್ಯಾಪ್ತಿಯ ವೈಟ್‌ಫೀಲ್ಡ್, ಮಹದೇವಪುರ ಮತ್ತು ಸರ್ಜಾಪುರ ಸೇರಿದಂತೆ ಕೆಲವು ಪ್ರದೇಶಗಳ ದೊಡ್ಡ ಅಪಾರ್ಟ್‌ಮೆಂಟ್‌ಗಳಲ್ಲಿ ಮೀಟರ್ ರೀಡರ್‌ಗಳಿಗೆ ಪ್ರವೇಶ ನೀಡುತ್ತಿಲ್ಲ ಎಂಬ ದೂರುಗಳು ಕೇಳಿಬಂದಿವೆ.

ಕೆಲ ನಿವಾಸಿಗಳು ತಮ ವೈಯಕ್ತಿಕ ಮಾಹಿತಿಯನ್ನು ಹಂಚಿಕೊಳ್ಳಲು ಹಿಂದೇಟು ಹಾಕುತ್ತಿರುವುದರಿಂದ ಸಮೀಕ್ಷೆ ಕಾರ್ಯಕ್ಕೆ ಅಡ್ಡಿಯಾಗುತ್ತಿದೆ ಎಂದು ಸಿಬ್ಬಂದಿ ತಿಳಿಸಿದ್ದಾರೆ. ಈ ಬಗ್ಗೆ ಮೀಟರ್ ರೀಡರ್‌ಗಳು ಬೆಸ್ಕಾಂ ಮುಖ್ಯ ಕಚೇರಿಯ ಗಮನಕ್ಕೂ ತಂದಿದ್ದಾರೆಂದು ತಿಳಿದುಬಂದಿದೆ.

ಪಕ್ಷಕ್ಕೆ ನಿಷ್ಠೆಯಿಂದ ಕೆಲಸ ಮಾಡಿದಕ್ಕೆ ಫಲ ಸಿಕ್ಕಿದೆ: ಸಚಿವ ಪಿ.ಎಂ. ನರೇಂದ್ರಸ್ವಾಮಿ

ಸಂಜೆ ಎಕ್ಸ್‌ಪ್ರೆಸ್ ಸುದ್ದಿ. ಬೆಂಗಳೂರು ಆಗಸ್ಟ್ 5: ಕಾಂಗ್ರೆಸ್ ಪಕ್ಷಕ್ಕೆ ನಿಷ್ಠೆಯಿಂದ ದುಡಿದರೆ ತಡವಾಗಿಯಾದರೂ ಸೂಕ್ತ ಫಲ ಸಿಗುತ್ತದೆ ಎಂಬುದಕ್ಕೆ ನನಗೆ ಸಿಕ್ಕಿರುವ ಸಚಿವ ಸ್ಥಾನವೇ ಸಾಕ್ಷಿ ಎಂದು ನೂತನ ಸಚಿವ ಪಿ.ಎಂ. ನರೇಂದ್ರಸ್ವಾಮಿ ತಿಳಿಸಿದರು.

ಮಂಗಳವಾರ ಸಂಜೆ ಶಾಸಕರ ಭವನದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಹಲವು ವರ್ಷಗಳಿಂದ ಕಾಂಗ್ರೆಸ್ ಪಕ್ಷಕ್ಕೆ ಸಂಘಟನೆ ಹಾಗೂ ಹೋರಾಟಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿದ್ದೇನೆ. 2013 ಹಾಗೂ 2023ರಲ್ಲಿ ಪಕ್ಷ ಅಧಿಕಾರಕ್ಕೆ ಬಂದಾಗ ಅವಕಾಶಗಳಿತ್ತು. ಆದರೆ ಈಗ ಸಚಿವ ಸ್ಥಾನ ಒಲಿದು ಬಂದಿದೆ ಎಂದರು.

ಸಂಪುಟ ವಿಸ್ತರಣೆಯ ವೇಳೆ ಹೈಕಮಾಂಡ್ ನಾಯಕರು, ಮುಖ್ಯಮಂತ್ರಿ ಸಿದ್ಧರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸೇರಿದಂತೆ ಎಲ್ಲಾ ಹಿರಿಯ ನಾಯಕರು ಆಲೋಚಿಸಿ, ಎಲ್ಲಾ ವರ್ಗ ಹಾಗೂ ಜಿಲ್ಲೆಗಳಿಗೆ ಆದ್ಯತೆ ನೀಡಿ ಈ ನಿರ್ಧಾರ ತೆಗೆದುಕೊಂಡಿದ್ದಾರೆ ಎಂದು ಹೇಳಿದರು.

2028ರಲ್ಲಿ ಮತ್ತೆ ಕಾಂಗ್ರೆಸ್ ಸರ್ಕಾರ: ಮುಂದಿನ ಚುನಾವಣೆಗೆ ಇನ್ನು ಕೇವಲ ಎರಡು ವರ್ಷಗಳಷ್ಟೇ ಬಾಕಿ ಇದ್ದು, ಸರ್ಕಾರ ಹಾಗೂ ಪಕ್ಷವನ್ನು ಇನ್ನಷ್ಟು ಬಲಪಡಿಸಬೇಕಾಗಿದೆ. ಇದಕ್ಕಾಗಿ ಗ್ಯಾರಂಟಿ ಯೋಜನೆಗಳ ಜೊತೆ ಜೊತೆಗೆ ಯುವ ಪೀಳಿಗೆಗೆ ಹಾಗೂ ಸಾರ್ವಜನಿಕರ ಆಶೋತ್ತರಗಳಿಗೆ ಸ್ಪಂದಿಸುವ ವಿನೂತನ ಯೋಜನೆಗಳನ್ನು ಜಾರಿಗೆ ತರಲಾಗುವುದು. ಇನ್ನಷ್ಟು ಉತ್ತಮ ಆಡಳಿತ ನೀಡುವ ಮೂಲಕ 2028ರ ವಿಧಾನಸಭಾ ಚುನಾವಣೆಯಲ್ಲಿ ರಾಜ್ಯದಲ್ಲಿ ಮತ್ತೆ ಕಾಂಗ್ರೆಸ್ ಪಕ್ಷವನ್ನು ಅಧಿಕಾರಕ್ಕೆ ತರುವುದು ನಿಶ್ಚಿತವಾಗಿದೆ. ಇದರೊಂದಿಗೆ 2029ರಲ್ಲಿ ರಾಹುಲ್ ಗಾಂಧಿ ಅವರನ್ನು ದೇಶದ ಪ್ರಧಾನಿಯನ್ನಾಗಿ ಮಾಡುವುದೇ ನಮ್ಮೆಲ್ಲರ ಶಪಥವಾಗಿದೆ ಎಂದರು.

ಮಳವಳ್ಳಿ ಕ್ಷೇತ್ರದ ಅಭಿವೃದ್ಧಿಗೆ ಒತ್ತು: ಮಳವಳ್ಳಿ ತಾಲೂಕಿನ ಎಲ್ಲಾ ಸರ್ಕಾರಿ ಶಾಲೆಗಳಿಗೆ ಸಿಎಸ್‌ಆರ್ ಅನುದಾನದ ಮೂಲಕ ಡಿಜಿಟಲೀಕರಣ ಹಾಗೂ ಮಲ್ಟಿಮೀಡಿಯಾ ಸೌಲಭ್ಯ ಒದಗಿಸಿ ಆಧುನಿಕ ಶಿಕ್ಷಣ ನೀಡಲಾಗುತ್ತಿದೆ. ನೀರಾವರಿ ಕ್ಷೇತ್ರಕ್ಕೆ ಹೆಚ್ಚಿನ ಆದ್ಯತೆ ನೀಡಲಾಗಿದ್ದು, ಸುಮಾರು 30 ಸಾವಿರ ಎಕರೆ ಭೂಮಿಗೆ ಹನಿ ನೀರಾವರಿ ಯೋಜನೆ ಸಿದ್ಧಗೊಂಡಿದೆ.

ರೈತರ ಬೆಳೆಗಳಿಗೆ ಸೂಕ್ತ ಬೆಲೆ ಹಾಗೂ ಮಾರುಕಟ್ಟೆ ಕಲ್ಪಿಸಲು ಫುಡ್ ಪ್ರೊಸೆಸಿಂಗ್ ಯುನಿಟ್‌ಗಳನ್ನು ಸ್ಥಾಪಿಸುವ ಯೋಜನೆ ಇದೆ ಎಂದು ತಿಳಿಸಿದರು.

ಜಿಲ್ಲೆಯ ಯೋಜನೆಗಳ ಆಧುನೀಕರಣ: ಮಂಡ್ಯ ಜಿಲ್ಲೆಯ ಕೆಆರ್‌ಎಸ್ ಅಚ್ಚುಕಟ್ಟು ಪ್ರದೇಶದ ನಾಲಾಗಳ ಆಧುನೀಕರಣ ಕಾರ್ಯವನ್ನು ಕೈಗೊಳ್ಳಲಾಗುತ್ತಿದ್ದು, ಮುಂದುವರೆದು ಪ್ರತಿಯೊಂದು ಕೆರೆಗೂ ನೀರು ತಲುಪುವಂತೆ ನೆಟ್‌ವರ್ಕ್ ರೂಪಿಸಲಾಗುತ್ತಿದೆ. ರೈತರ ಆದಾಯ ಹೆಚ್ಚಿಸಿ, ಮೂಲಸೌಕರ್ಯಗಳನ್ನು ಅಭಿವೃದ್ಧಿಪಡಿಸುವುದೇ ನಮ್ಮ ಸರ್ಕಾರದ ಮುಖ್ಯ ಗುರಿಯಾಗಿದೆ ಎಂದು ಪಿ.ಎಂ. ನರೇಂದ್ರಸ್ವಾಮಿ ಮಾಹಿತಿ ನೀಡಿದರು.

ಜೀವಂತ ಮತದಾರರನ್ನು ಮೃತರೆಂದು ಗುರುತಿಸಿದರೆ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ: ಜಗದೀಶ್.ಜಿ

ಸಂಜೆ ಎಕ್ಸ್‌ಪ್ರೆಸ್, ಬೆಂಗಳೂರು, ಆ 5: ಬೆಂಗಳೂರು ಕೇಂದ್ರ ನಗರ ಪಾಲಿಕೆ ವ್ಯಾಪ್ತಿಯಲ್ಲಿ ನಡೆಯುತ್ತಿರುವ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಕುರಿತು ಮಾನ್ಯತೆ ಪಡೆದ ರಾಜಕೀಯ ಪಕ್ಷಗಳ ಪ್ರತಿನಿಧಿಗಳೊಂದಿಗೆ ಇಂದು ನಡೆದ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಮಾನ್ಯ ಅಪರ ಜಿಲ್ಲಾ ಚುನಾವಣಾಧಿಕಾರಿಗಳು (ಕೇಂದ್ರ) ಹಾಗೂ ಬೆಂಗಳೂರು ಕೇಂದ್ರ ನಗರ ಪಾಲಿಕೆಯ ಆಯುಕ್ತರಾದ ಶ್ರೀ ಜಗದೀಶ್.ಜಿ ರವರು ಯಾವುದೇ ಅರ್ಹ ಮತದಾರರು ವಿಶೇಷ ಸಮಗ್ರ ಪರಿಷ್ಕರಣೆ (SIR)–2026

ನಿಗದಿತ ಅವಧಿಯಲ್ಲಿ ಗಣತಿ ನಮೂನೆಗಳ ಸಂಗ್ರಹ ಹಾಗೂ ಡಿಜಿಟಲೀಕರಣ: ಮತದಾರರಿಗೆ ವಿತರಿಸಲಾದ ಗಣತಿ ನಮೂನೆಗಳನ್ನು (Enumeration Form) ನಿಗದಿತ ಕೊನೆಯ ದಿನಾಂಕ ಮತ್ತು ಸಮಯದೊಳಗೆ ಬಿ.ಎಲ್.ಒ.ಗಳು ಮನೆ ಮನೆಗೆ ತೆರಳಿ ಸಂಗ್ರಹಿಸಬೇಕು. ಸಂಗ್ರಹಿಸಿದ ಎಲ್ಲಾ ನಮೂನೆಗಳನ್ನು ಕಡ್ಡಾಯವಾಗಿ ಪರಿಶೀಲಿಸಿ, ಚುನಾವಣಾ ಆಯೋಗದ ನಿರ್ದೇಶನದಂತೆ ಡಿಜಿಟಲೀಕರಣ ಕಾರ್ಯವನ್ನು ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸುವಂತೆ ಸೂಚಿಸಿದರು.

ಬಹು ಸಂಗ್ರಹಿತ ಮೀನು ಮತ್ತು ಸೀಗಡಿ ಮಾರಾಟ; ಸ್ಥಳೀಯರ ಆಕ್ರೋಶ

ಸಂಜೆ ಎಕ್ಸ್‌ಪ್ರೆಸ್ ಸುದ್ದಿ. ಬೆಂಗಳೂರು ಆಗಸ್ಟ್ 5; ಆಂಧ್ರ ಪ್ರದೇಶ ಮೂಲದ ಮೀನು ವ್ಯಾಪಾರಿ ಆಂಧ್ರದಿಂದ ಅನೇಕ ದಿನಗಳಿಂದ ಸಂಗ್ರಹಿಸಿ ಕೆಟ್ಟಿರುವ ಮೀನು ಮತ್ತು ಸೀಗಡಿಯನ್ನು ತಂದು ಮಾರಾಟ ಮಾಡಿ ಸಾರ್ವಜನಿಕರ ಆರೋಗ್ಯದ ಮೇಲೆ ಮಾರಕವಾಗಿದ್ದಾರೆ ಎಂದು ಗ್ರಾಹಕರು,ಸ್ಥಳೀಯರು ತೀವ್ರ ವಿರೋಧ ವ್ಯಕ್ತಪಡಿಸಿದ್ದಾರೆ.

ಬೆಂಗಳೂರು ನಗರದ ಕೆ.ಆರ್. ಪುರಂನಲ್ಲಿರುವ ಹೂಡಿ ಕೆರೆ ಹತ್ತಿರದ ಕೆ.ಆರ್. ಆರ್ ಮೆರೀನ್ ಫುಡ್ಸ್ ಎಂಬ ಮೀನು ಅಂಗಡಿ ನಡೆಸುತ್ತಿದ್ದು ಈ ವ್ಯಾಪಾರಿಯ ಬಳಿ ಸಾಕಷ್ಟು ಜನರು ಮೀನು ಖರೀದಿ ಮಾಡುತ್ತಿದ್ದು ಜನರಿಗೆ ತಿಳಿಯದೇ ಬಹು ಸಂಗ್ರಹಿತ ವಿವಿಧ ಮೀನು ಮತ್ತು ಸೀಗಡಿಗಳನ್ನು ಮಾರಾಟ ಮಾಡುತ್ತಿದ್ದಾರೆ.ಈ ಕುರಿತು ಬಿಬಿಎಂಪಿ ಆರೋಗ್ಯಾಧಿಕಾರಿಗಳಿಗೆ ದೂರು ನೀಡಿದ್ದು ಸೂಕ್ತ ಕೈಗೊಳ್ಳಲಿದ್ದಾರೆ ಎಂದು ಸ್ಥಳೀಯ ದೂರುದಾರರು ತಿಳಿಸಿದ್ದಾರೆ.

ಈ ಕುರಿತು ಅಂಗಡಿಯ ಮಾಲೀಕರಿಗೆ ಸ್ಥಳೀಯ ಜನರು ಪ್ರಶ್ನಿಸಿದರೆ ಅವರ ಮೇಲೆ ದಬ್ಬಾಳಿಕೆ ಮಾಡುತ್ತಿದ್ದಾರೆ ಆಂಧ್ರದಿಂದ ಬಂದಿರುವ ಕೆಟ್ಟಿರುವ ಮೀನು ಬಹಳ ಇಡಬಾರದು ಆದರೂ ಯಾವುದನ್ನು ಲೆಕ್ಕಿಸದೆ ಜನರ ಪ್ರಾಣಗಳ ಮೇಲೆ ಚೆಲ್ಲಾಟವಾಡುತ್ತಿದ್ದಾರೆ ಎಂದು ದೂರುದಾರರು ತಿಳಿಸಿದ್ದಾರೆ.

ಗಣತಿ ನಮೂನೆ ಗಣಕೀಕರಣದಲ್ಲಿ ದಾಖಲಾಗಿರುವ ಅಸಹಜತೆಗಳಿಗೆ ದಾಖಲೆಗಾಗಿ ಮತದಾರರಿಗೆ ನೋಟಿಸ್: ಕೆ.ಎನ್.ರಮೇಶ್

ಸಂಜೆ ಎಕ್ಸ್‌ಪ್ರೆಸ್, ಬೆಂಗಳೂರು, ಆ 5: ಬೆಂಗಳೂರು ದಕ್ಷಿಣ ಅಪರ ಜಿಲ್ಲಾ ಚುನಾವಣಾಧಿಕಾರಿ ಆದ ಶ್ರೀ ಕೆ.ಎನ್. ರಮೇಶ್ ರವರು ಇಂದು ಮಾನ್ಯತೆ ಪಡೆದ ರಾಜಕೀಯ ಪಕ್ಷಗಳ ಪ್ರತಿನಿಧಿಗಳೊಂದಿಗೆ ಮಹತ್ವದ ಸಭೆ ನಡೆಸಿದ್ದು, ಈ ವೇಳೆ ರಾಜಕೀಯ ಪಕ್ಷದ ಪ್ರತಿನಿಧಿಗಳು ನೀಡಿದ ಹಲವಾರು ಅಹವಾಲು ಹಾಗೂ ಸಲಹೆಗಳನ್ನು ಸ್ವೀಕರಿಸಿ ಉತ್ತರಿಸಿದರು.

ಮತದಾರರ ವಿವರದ ಅಸಹಜತೆಗಳಿಗೆ ಮತದಾರರಿಗೆ ನೋಟಿಸ್: ಸಹಿ ಮಾಡಿದ ಗಣತಿ ನಮೂನೆಗಳ ಡಿಜಿಟಲೀಕರಣವು ಈಗಾಗಲೇ ಪ್ರಾರಂಭಗೊಂಡಿದ್ದು, ಈ ನಮೂನೆಗಳ ಪರಿಶೀಲನಾ ಕಾರ್ಯ ಮತದಾರರ ನೋಂದಣಾಧಿಕಾರಿಗಳ ಹಂತದಲ್ಲಿ ಮಾಡಲಾಗುತ್ತದೆ. ಪರಿಶೀಲನೆ ವೇಳೆಯಲ್ಲಿ ಮತದಾರರ ಅಸಹಜ ವಿವರಗಳಾದ ತಂದೆ/ತಾತ ಇವರ ಮಕ್ಕಳ/ಮೊಮ್ಮಕ್ಕಳ ನಡುವೆ ವಯಸ್ಸಿನಲ್ಲಿ ತೀರಾ ಕಡಿಮೆ ಅಂತರವಿರುವ ಅಸಹಜತೆ ಸೇರಿದಂತೆ ಇನ್ನಿತರ ಅಸಹಜತೆಗಳಿಗೆ ಮತದಾರರ ನೋಂದಣಾಧಿಕಾರಿಗಳು ನೋಟಿಸ್ ನೀಡಲಿದ್ದು ಅಗತ್ಯ ದಾಖಲೆಗಳನ್ನು ಪರಿಶೀಲನೆಗೆ ಸಲ್ಲಿಸಿದಲ್ಲಿ ಮಾತ್ರ ಅಂತಹ ಮತದಾರರ ಹೆಸರುಗಳನ್ನು ಉಳಿಸಿಕೊಳ್ಳಲಾಗುವುದು ಎಂದು ಅಪರ ಜಿಲ್ಲಾ ಚುನಾವಣಾಧಿಕಾರಿಗಳು ತಿಳಿಸಿದರು.

ASDD ಮನೆಗಳಿಗೆ ಸ್ಟಿಕರ್ ಅಳವಡಿಕೆ: ASDD (ಗೈರುಹಾಜರಿ, ಸ್ಥಳಾಂತರಗೊಂಡ, ಮೃತಪಟ್ಟ ಮತ್ತು ನಕಲಿ ಮತದಾರರು –

ವಿಜಯಾನಂದ ಕಾಶಪ್ಪನವರ್ ಅವರ ಅಭಿಮಾನಿಗಳ ಈ ನಡೆ ಇಂದಿನ ಯುವ ರಾಜಕಾರಣಕ್ಕೆ ಮತ್ತು ಸಮಾಜಕ್ಕೆ ಒಂದು ಸಕಾರಾತ್ಮಕ ಬದಲಾವಣೆಯ ಮುನ್ನುಡಿಯಾಗಿದೆ.

ವಿಜಯಾನಂದ ಕಾಶಪ್ಪನವರ್ ಅವರು ಕೂಡ ತಮ್ಮ ಜನಪರ ಹೋರಾಟಗಳು ಮತ್ತು ನೇರ ನುಡಿಯ ರಾಜಕಾರಣಕ್ಕೆ ಹೆಸರುವಾಸಿಯಾದವರು. ಹಿಂದೆ

ಶಾಸಕರಾಗಿ ಕಾರ್ಯನಿರ್ವಹಿಸಿದ ಸಂದರ್ಭದಲ್ಲೂ ಅವರು ಸರಳ ಜೀವನಶೈಲಿಗೆ ಒತ್ತು ನೀಡಿದ್ದರು.

ಸಾರ್ವಜನಿಕರು ಕಷ್ಟಪಟ್ಟು ತರುವ ದುಬಾರಿ ಉಡುಗೊರೆಗಳು ಅಥವಾ ಶಾಲು–ಪೇಟಗಳ ಬದಲು ಜನರ ಸಮಸ್ಯೆಗಳನ್ನು ಆಲಿಸುವುದೇ ತಮಗೆ ನಿಜವಾದ ಸನ್ಮಾನ ಎಂದು ಅವರು ಹಿಂದೆ ಹಲವು ವೇದಿಕೆಗಳಲ್ಲಿ ಅಭಿಪ್ರಾಯಪಟ್ಟಿದ್ದರು.

ಈ ವಿನೂತನ ನಿರ್ಧಾರವು ರಾಜಕೀಯ ವಲಯದಲ್ಲಿ ಪ್ರಶಂಸೆಗೆ ಪಾತ್ರವಾಗಿದ್ದು, ಜನಸಾಮಾನ್ಯರೊಂದಿಗೆ ನಾಯಕರು ಮತ್ತಷ್ಟು ಹತ್ತಿರವಾಗಲು ಇಂತಹ ಸರಳತೆಯ ಕ್ರಮಗಳು ಅತ್ಯಂತ ಅವಶ್ಯಕವಾಗಿವೆ ಎಂಬುದನ್ನು ಈ ಘಟನೆ ಮತ್ತೊಮ್ಮೆ ಸಾಬೀತುಪಡಿಸಿದೆ.

[illegible] ಗಳು, ಬಿ.ಎಲ್.ಓ ಗಳು ಕ್ರಮ ವಹಿಸಬೇಕೆಂದು ಅಧಿಕಾರಿಗಳಿಗೆ ಸೂಚನೆ ನೀಡಿದರು. ವಿಶೇಷ ಸಮಗ್ರ ಪರಿಷ್ಕರಣೆಯಲ್ಲಿ ಮತದಾರರ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಸಾರ್ವಜನಿಕರು ತಮ್ಮ ಹಾಗೂ ತಮ್ಮ ಕುಟುಂಬದ ಸದಸ್ಯರ ವಿವರಗಳನ್ನು ಸರಿಯಾಗಿ ಭರ್ತಿ ಮಾಡಿ, ಸಹಿ ಮಾಡಿದ ಗಣತಿ ನಮೂನೆಗಳನ್ನು ಯಾವುದೇ ವಿಳಂಬವಿಲ್ಲದೆ ಹಿಂತಿರುಗಿಸಬೇಕು. ಗಣತಿ ನಮೂನೆಗಳನ್ನು ಸಲ್ಲಿಸಲು ಆಗಸ್ಟ್ 8 ರವರೆಗೆ ಅವಕಾಶವಿದ್ದು, ಡಿಜಿಟಲೀಕರಣ ಕಾರ್ಯವನ್ನು ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸಬೇಕಿರುವುದರಿಂದ ಸಾರ್ವಜನಿಕರು ತುರ್ತಾಗಿ ನಮೂನೆಗಳನ್ನು ಬಿ.ಎಲ್.ಓ ಗಳಿಗೆ ಸಲ್ಲಿಸಬೇಕು ಎಂದು ಕೋರಿದರು.

ಗಣತಿ ನಮೂನೆಗಳನ್ನು ಹಿಂತಿರುಗಿಸದಿದ್ದಲ್ಲಿ ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರು ಕೈಬಿಡುವ ಸಾಧ್ಯತೆಯೂ ಇದೆ. ಮತದಾರರ ಅನುಕೂಲಕ್ಕಾಗಿ ಬೂತ್ ಮಟ್ಟದ ಕೇಂದ್ರಗಳು ಹಾಗೂ ಮತದಾರರ ಸೌಲಭ್ಯ ಕೇಂದ್ರಗಳನ್ನು ತೆರೆಯಲಾಗಿದ್ದು, ಅಲ್ಲಿಯೂ ನಮೂನೆಗಳನ್ನು ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯವನ್ನು ಯಶಸ್ವಿಯಾಗಿ ಪೂರ್ಣಗೊಳಿಸಲು ಸಾರ್ವಜನಿಕರು ಸಹಕರಿಸಬೇಕೆಂದು ಮನವಿ ಮಾಡಿದರು.

ಪ್ರತಿಯೊಬ್ಬ ಅರ್ಹ ಮತದಾರರಿಗೆ ಗಣತಿ ನಮೂನೆ ತಲುಪಿಸುವುದು ಕಡ್ಡಾಯ

ಗಣತಿ ನಮೂನೆಗಳನ್ನು ಸಂಬಂಧಿತ ವಿಳಾಸದಲ್ಲಿರುವ ಪ್ರತಿಯೊಬ್ಬ ಅರ್ಹ ವ್ಯಕ್ತಿಗೆ ಕಡ್ಡಾಯವಾಗಿ ತಲುಪಿಸಿರುವುದನ್ನು ಖಚಿತಪಡಿಸಿಕೊಳ್ಳಬೇಕು. ಯಾವುದೇ ಅರ್ಹ ಮತದಾರರು ಮತದಾರರ ಪಟ್ಟಿಯಿಂದ ಹೊರಗುಳಿಯದಂತೆ ವಿಶೇಷ ಕಾಳಜಿ ವಹಿಸಿ, ಮನೆ ಮನೆಗೆ ಭೇಟಿ ನೀಡಿ ನಿಖರ ಪರಿಶೀಲನೆಯೊಂದಿಗೆ ಕಾರ್ಯನಿರ್ವಹಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಜೀವಂತ ಮತದಾರರನ್ನು ಮೃತರೆಂದು ಗುರುತಿಸಿದರೆ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ: ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ (SIR)2026 ಪ್ರಕ್ರಿಯೆಯಲ್ಲಿ ಗಣತಿ ನಮೂನೆ ಅರ್ಜಿಗಳಲ್ಲಿ ಮತದಾರರು ಜೀವಂತವಾಗಿದ್ದರೂ ಸಹ ಮೃತರಾಗಿದ್ದಾರೆ (Dead) ಎಂದು ಸುಳ್ಳು / ತಪ್ಪು ಮಾಹಿತಿಯನ್ನು ಬಿ. ಎಲ್.ಓ ಗಳು ನೀಡಿದಲ್ಲಿ ಹಾಗೂ ಮತದಾರರು ವಾಸ್ತವವಾಗಿ ಜೀವಂತವಾಗಿರುವುದು ಹಂತದಲ್ಲಿ ಕಂಡುಬಂದಲ್ಲಿ, ಸಂಬಂಧಿತ ಅಧಿಕಾರಿಗಳು ಮತ್ತು ಸಿಬ್ಬಂದಿಯ ವಿರುದ್ಧ ಚುನಾವಣಾ ಆಯೋಗದ ನಿಯಮಾವಳಿಗಳ ಅನುಸಾರ ಸೂಕ್ತ ಶಿಸ್ತುಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

ಠಭಜಟಣಜಜ, ಖುಜಣಜಜ, ಆಜಚಜ, ಆಣಠಟುಭಿಚಣಜ) ಪರಿಶೀಲನೆ ಪೂರ್ಣಗೊಂಡ ಪ್ರತಿಯೊಂದು ಮನೆಗೂ ಭೇಟಿ ಸಂದರ್ಭದಲ್ಲಿ ಪಡೆಯಲಾಗಿದೆ ಎಂದು ಮಾಹಿತಿಯ ಸತ್ಯಾಸತ್ಯತೆಗಾಗಿ BLO ಗಳಿಂದ ಕಡ್ಡಾಯವಾಗಿ ಸ್ಟಿಕರ್‌ಗಳನ್ನು ಅಂಟಿಸಲಾಗುತ್ತದೆ.

ನಮೂನೆ –6 ವಿತರಣೆ: ಕರಡು ಮತದಾರರ ಪಟ್ಟಿಯಲ್ಲಿ ಹೆಸರು ಇಲ್ಲದಿದ್ದರೆ ಅಥವಾ ಕರಡು ಮತದಾರರ ಪಟ್ಟಿಯಲ್ಲಿ ಹೆಸರು ಬಿಟ್ಟುಹೋಗಿರುವ ಅರ್ಹ ಮತದಾರರು ಹೊಸದಾಗಿ ಹೆಸರು ಸೇರ್ಪಡೆಗೊಳಿಸಲು ಅಗತ್ಯ ದಾಖಲೆಗಳೊಂದಿಗೆ ನಮೂನೆ –6 ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.

ಅರ್ಜಿ ಪರಿಶೀಲನೆ ಮತ್ತು ಹೆಚ್ಚುವರಿ ಸಿಬ್ಬಂದಿ ನಿಯೋಜನೆ: ಒಬ್ಬ ಅಧಿಕಾರಿಯು ದಿನಕ್ಕೆ ಗರಿಷ್ಠ 150 ಗಣತಿ ನಮೂನೆ ಅರ್ಜಿಗಳನ್ನು ಪರಿಶೀಲಿಸಿ ದೃಢೀಕರಿಸಬಹುದಾಗಿದ್ದು, ಗಣತಿ ನಮೂನೆ ಪರಿಶೀಲನಾ ಕಾರ್ಯವನ್ನು ಶೀಘ್ರವಾಗಿ ಪೂರ್ಣಗೊಳಿಸಲು ಹೆಚ್ಚುವರಿ ಸಿಬ್ಬಂದಿ ಬಳಕೆಗಾಗಿ ಮುಖ್ಯ ಚುನಾವಣಾಧಿಕಾರಿಗಳಿಗೆ ಪತ್ರ ಬರೆದು ಅನುಮೋದನೆ ಬಂದ ನಂತರ ಹೆಚ್ಚುವರಿ ಅಧಿಕಾರಿಗಳನ್ನು ಪರಿಶೀಲನಾ ಕಾರ್ಯಕ್ಕೆ ನಿಯೋಜಿಸಲಾಗುವುದು ಎಂದು ತಿಳಿಸಿದರು.

Published, owned and Printed by CHANDRASHEKAR G, Published at : # 36, 2nd floor, Sir MV Nagar, Ramamurthynagar, Bangalore 560016.
Printed at Dashapramathi Mudranalaya No.45, 4th Cross, Srigandhadakaval, Bangalore-79 EDITOR: CHANDRASHEKAR G